ಕೌಶಲ್ಯ ತರಬೇತಿಯೊಂದಿಗೆ ಉದ್ಯೋಗ ಇವೆರಡರಲ್ಲಿ ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಳ್ಳಬಹುದಾಗಿದೆ.

ಆಯ್ಕೆ ಮಾಡಿಕೊಂಡ ನಂತರ ಯೋಜನಾ ಬೆಂಬಲ ಸಂಸ್ಥೆಗಳು /ಯೋಜನಾ ಅನುಷ್ಠಾನ ಸಂಸ್ಥೆಗಳ ಮುಖಾಂತರ ತರಬೇತಿ ನೀಡಿ ಸ್ವಉದ್ಯೋಗ/ವೇತನಾಧಾರಿತ ಉದ್ಯೋಗಾವಕಾಶ ಕಲ್ಪಿಸಲು ಯೋಜಿಸಲಾಗಿದೆ.

ಇ) 18–35 ವರ್ಷ ವಯೋಮಿತಿಯುಳ್ಳ ಕನಿಷ್ಠ 8ನೇ ತರಗತಿ ಉತ್ತೀರ್ಣರಾದ ಒಟ್ಟು ಎರಡು ಲಕ್ಷ ಯುವಜನರಿಗೆ ಈ ಸೌಲಭ್ಯವನ್ನು ತಲುಪಿಸುವ ಗುರಿ ಹೊಂದಲಾಗಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು

1402(2018); ಶ್ರೀ ಬಾಲಕೃಷ್ಣ ಹೆಚ್.ಸಿ (ಮಾಗಡಿ)

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿರುವ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ಈ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಯಾವ ಯಾವ ಕಾಲೇಜುಗಳಲ್ಲಿ ಕೊರತೆ ಇದೆ; ಕಟ್ಟಡ ಮತ್ತು ಸಿಬ್ಬಂದಿಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು; ಯಾವ ಕಾಲಮಿತಿಯೊಳಗೆ ಕೊರತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುವುದು?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಒಟ್ಟು–02

ಆ) ಬಂದಿದೆ

ಇ) ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾಗಡಿ ಇಲ್ಲಿನ ಹೆಚ್ಚುವರಿ ಕೊಠಡಿ ನಿರ್ಮಾಣಕ್ಕೆ ₹ 100.00 ಲಕ್ಷ ಪ್ರಯೋಗಾಲಯಕ್ಕಾಗಿ ₹ 60.00 ಲಕ್ಷ ಮತ್ತು ಶೌಚಾಲಯಕ್ಕಾಗಿ ₹ 5.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಕಾಮಗಾರಿ ಪ್ರಾರಂಭವಾಗಿದೆ.

ಆರ್ಥಿಕ ಇಲಾಖೆಯು ಅನುಮೋದನೆ ನೀಡಿರುವ ಬೋಧಕ ಹುದ್ದೆಗಳನ್ನು ತುಂಬಲು ಕ್ರಮಕೈಗೊಳ್ಳಲಾಗುತ್ತಿದೆ. ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಲಾಗುತ್ತಿದೆ. ಅನುಮೋದನೆ ನೀಡಿದ ನಂತರ ಖಾಲಿ ಹುದ್ದೆಗಳನ್ನು ಭರ್ತಿಮಾಡಲಾಗುವುದು.

ಶೌಚಾಲಯ ಮತ್ತು ಸ್ನಾನಗೃಹಗಳ ನಿರ್ಮಾಣ

1403(2019); ಶ್ರೀ ಬಾಲಕೃಷ್ಣ ಹೆಚ್.ಸಿ (ಮಾಗಡಿ)

ಅ) ಮಾಗಡಿ ಕ್ಷೇತ್ರದ ವ್ಯಾಪ್ತಿಯ ಐತಿಹಾಸಿಕ ಸ್ಥಳಗಳಾದ ಸುಗ್ಗನಹಳ್ಳಿ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನ ಹಾಗೂ ಸಾವನದುರ್ಗದ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನಗಳಿಗೆ ಬರುವ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಶೌಚಾಲಯ ಮತ್ತು ಸ್ನಾನಗೃಹಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಎರಡೂ ಸ್ಥಳಗಳಲ್ಲಿ ಶೌಚಾಲಯ ಮತ್ತು ಸ್ನಾನಗೃಹಗಳ ನಿರ್ಮಾಣಕ್ಕೆ ಅಗತ್ಯವಿರುವ ಅನುದಾನ ಎಷ್ಟು;

ಇ) ಶೌಚಾಲಯ ಮತ್ತು ಸ್ನಾನಗೃಹಗಳ ನಿರ್ಮಾಣಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಸಣ್ಣ ಕೈಗಾರಿಕೆ, ಸಕ್ಕರೆ ಮತ್ತು ಮುಜರಾಯಿ ಸಚಿವರು)

ಅ) ಹೌದು.